## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಅಧ್ಯಕ್ಷರು, ಶಿವಮೊಗ್ಗ ಜಿಲ್ಲಾ ಪಂಚಾಯತ್ ಇವರ ಉಪಯೋಗಕ್ಕಾಗಿ ಹೊಸ ವಾಹನ ಖರೀದಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ: 1)ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಶಿವಮೊಗ್ಗ ಇವರ ಪತ್ರ ಸಂಖ್ಯೆ; ಜಿಪಂಶಿ:ಆಡಳಿತ(1):ವಿವ-11:2014 ದಿನಾಂಕ 11.12.2014.
2)ಸರ್ಕಾರಿ ಆದೇಶ ಸಂ. ಗ್ರಾಅಪ 327 ಕೆಎಸ್ಎಸ್ 2014 ದಿನಾಂಕ 28.11.2014

:-:

**ಪ್ರಸ್ತಾವನೆ:**

ಮೇಲೆ (2) ರಲ್ಲಿ ಓದಲಾದ ದಿನಾಂಕ 28.11.2014ರ ಸರ್ಕಾರಿ ಆದೇಶದಲ್ಲಿ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ ಶಿವಮೊಗ್ಗ ಇವರ ಉಪಯೋಗಕ್ಕಾಗಿ ಅವರು ಬಳಸುತ್ತಿರುವ ವಾಹನ ಸಂಖ್ಯೆ: ಕೆಎ 14 ಜಿ 227 ಅನುಪಯುಕ್ತವಾಗಿರುವ ಕಾರಣ ₹ 6.50 ಲಕ್ಷಗಳ ಮಿತಿಯೊಳಗೆ ಹೊಸ ವಾಹನ ಖರೀದಿಸಲು ಅನುಮೋದನೆ ನೀಡಲಾಗಿತ್ತು. ಮೇಲೆ (1)ರಲ್ಲಿ ಓದಲಾದ ದಿನಾಂಕ 11.12.2014ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಶಿವಮೊಗ್ಗ ಇವರು ಜಿಲ್ಲಾ ಪಂಚಾಯತ್ ಅಧ್ಯಕ್ಷರ ಉಪಯೋಗಕ್ಕಾಗಿ ಹಳೆಯ ವಾಹನದ ಬದಲಾಗಿ ಈಗಾಗಲೇ ಮೇಲೆ ಓದಲಾದ ದಿನಾಂಕ 28.11.2014ರ ಆದೇಶದಲ್ಲಿ ಮಂಜೂರು ಮಾಡಿರುವ ₹ 6.50 ಲಕ್ಷಗಳ ಮಿತಿಯೊಳಗಿನ ವಾಹನದ ಬದಲಾಗಿ ಹೊಸ ಟೊಯೋಟಾ ಇನ್ನೋವಾ ಕಾರನ್ನು ಖರೀದಿಸಲು ಹಾಗೂ ಸದರಿ ವೆಚ್ಚವನ್ನು ಜಿಲ್ಲಾ ಪಂಚಾಯತ್ ಲೆಕ್ಕ ಶೀರ್ಷಿಕೆ 2059-00-101-0-29-200 NP ಹೊಸ ಪೂರೈಕೆ, 2702-00-101-0-18-226 NP ಹೊಸ ಪೂರೈಕೆ, 2702-00-101-0-29-051 NP ರ ಅಡಿಯಲ್ಲಿ ಭರಿಸಲು ಸರ್ಕಾರದ ಅನುಮತಿಯನ್ನು ಕೋರಿರುತ್ತಾರೆ.

ಈಗಾಗಲೇ ಮೇಲೆ (2) ರಲ್ಲಿ ಓದಲಾದ ದಿನಾಂಕ 28.11.2014ರ ಆದೇಶದ ಮುಂದುವರಿಕೆಯಲ್ಲಿ ಶಿವಮೊಗ್ಗ ಜಿಲ್ಲಾ ಪಂಚಾಯತ್ ಅಧ್ಯಕ್ಷರ ಉಪಯೋಗಕ್ಕೆ ಹೊಸ ಟೊಯೋಟಾ ಇನ್ನೋವಾ ಕಾರನ್ನು ಖರೀದಿಸಲು ಪರಿಶೀಲಿಸಲಾಗಿ ಈಗಾಗಲೇ ₹ 6.50 ಲಕ್ಷಗಳ ಮಿತಿಯೊಳಗೆ ಹೊಸ ಕಾರನ್ನು ಖರೀದಿಸಲು ಅನುಮೋದನೆ ನೀಡಿರುವ ದಿನಾಂಕ 28.11.2014ರ ಆದೇಶವನ್ನು ಭಾಗಶಃ ಮಾರ್ಪಡಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಗ್ರಾಅಪ 11 ಕೆಎಸ್ಎಸ್ 2015 ಬೆಂಗಳೂರು**
**ದಿನಾಂಕ 03.03.2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರಿ ಆದೇಶ ಸಂಖ್ಯೆ; ಗ್ರಾಅಪ 327 ಕೆಎಸ್ಎಸ್ 2014 ದಿನಾಂಕ 28.11.2014 ಅನ್ನು ಭಾಗಶಃ

. . 2 ..

ಮಾರ್ಪಡಿಸಿ, ಶಿವಮೊಗ್ಗ ಜಿಲ್ಲಾ ಪಂಚಾಯತ್ ಅಧ್ಯಕ್ಷರ ಉಪಯೋಗಕ್ಕಾಗಿ ₹ 9.00 ಲಕ್ಷಗಳ ಮಿತಿಯೊಳಗೆ (ತೆರಿಗೆ ಹೊರತುಪಡಿಸಿ) ಹೊಸ ಟೊಯೋಟಾ ಇನ್ನೋವಾ ಕಾರನ್ನು ಖರೀದಿಸಲು ಹಾಗೂ ಅದರ ಖರೀದಿಯ ವೆಚ್ಚವನ್ನು ಲೆಕ್ಕ ಶೀರ್ಷಿಕೆ 2059-00-101-0-29-200 NP ಹೊಸ ಪೂರೈಕೆ, 2702-00-101-0-18-226 NP ಹೊಸ ಪೂರೈಕೆ, 2702-00-101-0-29-051 NP ರ ಅಡಿಯಲ್ಲಿ ಲಭ್ಯವಿರುವ ಅನುದಾನದಲ್ಲಿ ಭರಿಸಿ ಖರೀದಿಸಲು, ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ಅನುಮೋದನೆ ನೀಡಿದೆ.

1. ಹಳೆಯ ವಾಹನವನ್ನು ನಿಯಮಾನುಸಾರ ವಿಲೇವಾರಿ ಮಾಡಿ ಅದರಿಂದ ಬರುವ ಮೌಲ್ಯವನ್ನು ಸರ್ಕಾರಿ ಲೆಕ್ಕ ಶೀರ್ಷಿಕೆಗೆ ಜಮಾ ಮಾಡುವುದು.
2. ಸದರಿ ಹೊಸ ವಾಹನ ಖರೀದಿಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ ಹಾಗೂ ಅದರಡಿ ರಚಿಸಿರುವ ನಿಯಮಗಳನ್ನು ಪಾಲಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: ಆಇ 315 ವೆಚ್ಚ-6/2014 ದಿನಾಂಕ 02.03.2015 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

3/3/15
(ಸಿದ್ಧಮಲ್ಲಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ (ಪ್ರಭಾರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಶಿವಮೊಗ್ಗ
3. ಖಜಾನಾಧಿಕಾರಿ, ಜಿಲ್ಲಾ ಖಜಾನೆ, ಶಿವಮೊಗ್ಗ
4. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು
6. ಅಪರ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಸಹಾಯಕರು.
7. ಮೇಲ್ವಿಚಾರಕರು, ಗಣಕ ಕೋಶ, ಗ್ರಾಅ ಮತ್ತು ಪಂ.ರಾಜ್ ಇಲಾಖೆ.
8. ಮಾಹಿತಿ ಕೇಂದ್ರ/ ಶಾಖಾ ರಕ್ಷಕ ಕಡತ / ಹೆಚ್ಚುವರಿ ಪ್ರತಿ.